ತುಮಕೂರು ಡಿಸ್ಟ್ರಿಕ್ಟ್.

ತಾರೀಖು 18ನೇ ಜನವರಿ 1896ನೇ ಇಸವಿ.

ಇದರಿಂದ ಸಮಸ್ತ ಜನಗಳಿಗೂ ತಿಳಿಯಪಡಿಸುವದೇನಂದರೆ,—ಕೊರಟಗೆರೆ ಸಬ್ ತಾಲ್ಲೂಕು ಚೆನ್ನರಾಯದುರ್ಗ ಸಮ್ಮತು ಹೊಲ್ಲಾಳು ಬಳಿ ಸರ್ವೇ 38ನೇ ನಂಬರಿನಲ್ಲಿರತಕ್ಕ ಜಲ್ಲಿನ ಬಾಬತು ನುಂಟಸ, ಭೂವಿ ವಗ್ಗೆರೆ ಪರಸ್ಥಳೀಕರ ಉಪಯೋಗಕ್ಕೆ ಆನು ಕೂಲವಾಗಿರುವ ಕಟ್ಟಡವನ್ನು ಡಿಸ್ಟ್ರಿಕ್ಟ್ ಫಂಡ್ ಬೋರ್ಡಿನವರ ತನಿಬೆಗೆ ಬಳಪಡಿಸಿಕೊಂಡು ಮುನಾಫರ್‌ಖಾನೆ ಯೆಂಬ ಹೆಸರಿಟ್ಟು ಕೊಂಚ ಕಾಮಗಾರಿ ಮಾಡಿಸಬೇಕೆಂದು ತಾತ್ಪರ್ಯ ಇಟ್ಟುಕೊಂಡಿರುತ್ತಾರೆ. ಇದನ್ನ ಕಟ್ಟಿಸಿರತಕ್ಕವರು ಇಂತವರೆಂಬದಾಗಲಿ, ಇದ್ದರ ವಾರಸ್ದಾರರಾಗಲಿ ಈಗ್ಯೆ ಸುಮಾರು 40, 50 ವರುಷದ ಲಾಗಾಯತು ಇರುವಂತೆ ಗೊತ್ತಾಗಿಲ್ಲ. ಆದ್ದರಿಂದ ಈ ಲಾಗಾಯತು ಮೂರು ತಿಂಗಳೊಳಗಾಗಿ ಈ ಕಟ್ಟಡಕ್ಕೆ ಹಾಗೆ ವಾರಸ್ದಾರರಾದವರು ಯಾರಾದರೂ ಯಿದ್ದ ಪಕ್ಷದಲ್ಲಿ ನಮ್ಮ ರೂಬರೂ ಹಾಜರಾಗಿ ತಮ್ಮ ಹಕ್ಕನ್ನು ದೃಢಪಡಿಸಿಕೊಳ್ಳಬಹುದು. ಇಲ್ಲವಾದರೆ ನಂತರ ಬರುವ ತಕರಾರಿಗೆ ಅವಕಾಶವಿಲ್ಲವಾದ್ದು, ತಿಳಿಯುವದು.

ಎಂ. ನಾರಾಯಣರಾವ್,
ಡಿಪ್ಯುಟಿ ಕ್ಯಮ್ಮಿಷನರ್ ಮತ್ತು ಡಿಸ್ಟ್ರಿಕ್ಟ್ ಫಂಡ್ ಬೋರ್ಡ್ ಪ್ರೆಸಿಡೆಂಟ್.

ಕೋಲಾರ ಡಿಸ್ಟ್ರಿಕ್ಟ್.

ಸ್ಥಿರಸ್ವತ್ತಿನ ಹರಾಜ್ ಬಗ್ಯೆ ಕೊಡಲ್ಪಟ್ಟ ಇಸ್ತಿಹಾರ್ ವ ಪ್ರಸಿದ್ಧ ಪತ್ರಿಕೆ.

ತಾರೀಖು 4ನೇ ಫಿಬ್ರವರಿ 1896.

1. ಕಾಯಂಗುತ್ತಾ ಬಾಕಿದಾರರಾದ ಅಂಗತಟ್ಟಿ ಗ್ರಾಮದ ಹನುಮಂತರಾಯುಂದ ಬರಬೇಕಾದ ಜಮ್ಮಿ ಕಂದಾಯದ ಬಾಕಿಗಾಗಿ ಹಿಡುವಳಿ ಹಕ್ಕು ತಪ್ಪಿ ಹೋಗಿದೆ ಯಂದು ಪ್ರಕಟಿಸಲ್ಪಟ್ಟಿರುವ ಇದರಡಿ ನಮೂದಾಗುವ ಸ್ಥಿರಸ್ವತ್ತು ಕೋಲಾರ ಡಿಸ್ಟ್ರಿಕ್ಟ್ ಬಿಡ್ಲಘಟ್ಟ ತಾಲ್ಲೂಕು ಕಜೇರಿಯಲ್ಲಿ 1896ನೇ ಇಸವಿ ಮಾರ್ಚಿ 18ನೇ ತಾರೀಖಿನಲ್ಲಿ ಬಹಿರಂಗವಾದ ಹರಾಜು ಮಾಡಲ್ಪಡುತ್ತೆಂದು ಇದರಿಂದ ಪ್ರಸಿದ್ಧ ಪಡಿಸಲ್ಪಟ್ಟು ಇದೆ.

ಹರಾಜು ಆ ದಿವಸ ದಿವಿ 11 ಘಂಟೆಗೆ ಉಪಕ್ರಮಿಸಲ್ಪಡುತ್ತೆ. ಸ್ವತ್ತು ಏಕದಂ ಚಡದರಖಾಸ್ತುದಾರನ ಹೆಸರಿಗೆ ನಿಲ್ಲಿಸಲ್ಪಡುತ್ತೆ.

2. ಸದರೀ ಸ್ವತ್ತಿಗಾಗಿ ಹರಾಜುದಾರನು 1894—95ನೇ ಸಾಲಿಗೆ ಪೂರ್ತಿಯಾಗಿ ಪಾವತಿ ಮಾಡಬೇಕಾದ ಕಂದಾಯದ ಮೊಬಲಗು ಇದರಡಿ ಕಾಣಿಸಿರುವ ತಖ್ತೆಯಲ್ಲಿ ನಮೂದಿಸಿರುವ ತಖ್ಮೀಲ್ ಮೇರಿಗೆ 1137—11—0 ರೂಪಾಯಿ ಆಗಿರುತ್ತೆ.

3. ಹರಾಜು ಕಾಲದಲ್ಲಿ ಹರಾಜುದಾರನು ಹರಾಜು ಮೊಬಲಗಿನ ಶೇಕಡಾ 25 ರೂಪಾಯಿಯನ್ನು ಡಿಪಾಜಿಟ್ ಹಾಜರ್ಮಾಡಬೇಕಾಗಿರುತ್ತೆ. ಅದು ಜಾತಾ ಹರಾಜು ಬಾಬತು ಬಾಕಿ ಮೊಬಲಗು ಹರಾಜು ತಾರೀಖು ಲಾಗಾಯತು 15 ದಿವಸಗಳಲ್ಲಿ ಪಾವತಿ ಮಾಡಲ್ಪಡದೇ ಹೋದಲ್ಲಿ ಮೇಲೆ ಹೇಳಿದ ಡಿಪಾಜಿಟ್ ಮೊಬಲಗನ್ನ ಹಾಜರ್ಮಾಡಿದವನು ಕಳದುಕೊಳ್ಳಲು ಗುರಿಯಾಗುತ್ತಾನೆ.

4. ಅಂಥಾ ಡಿಪಾಜಿಟ್ ಮೊಬಲಗು ಹಾಜರ್ಮಾಡಲ್ಪಡದೆ ಯಾ ಹರಾಜು ಬಾಬತು ಬಾಕಿ ಮೊಬಲಗು ಪಾವತಿ ಮಾಡಲ್ಪಡದೆ ಹೋದಾಗ್ಯೆ ಸದರೀ ಸ್ವತ್ತು ಮೊದಲು ಹರಾಜುದಾರನ ಖರ್ಚಿನಿಂದಲೂ ಮತ್ತು ಅವನಿಗೆ ಆದರಿಂದ ಉಂಟಾಗಬಹುದಾದ ನಷ್ಟಕ್ಕೆ ಗುರಪಡಿಸಿಯೂ ಪುನಹ ಹರಾಜು ಮಾಡಲ್ಪಡುತ್ತೆ.

5. ಹರಾಜಿನಲ್ಲಿ ಸವಾಲ್ ಮಾಡತಕ್ಕ ಜನಗಳು ಖುದ್ದು ತಮ್ಮ ಸ್ವಂತಕ್ಕೋಸ್ಕರ ಸವಾಲ್ ಮಾಡುತ್ತಾರೆಯೇ ಯಾ ವಿಜಂಟ್ ಯಾ ಮುತಾಲೀಕರಾಗಿ ಸವಾಲ್ ಮಾಡುತ್ತಾರೆಯೇ ಎಂಬ ಅಂಶವನ್ನ ತಿಳಿಸಬೇಕೆಂತಲೂ, ಇತರರಿಗೋಸ್ಕರ ಮುತಾಲೀಕರಾಗಿ ಸವಾಲ್ ಮಾಡುವ ಸಂದರ್ಭದಲ್ಲಿ ಅಂಥಾ ತಮ್ಮ ಯಜಮಾನರಿಂದ ಸಹಿ ಮಾಡಲ್ಪಟ್ಟ ಲಿಖಿತವಾದ ಅಧಿಕಾರ ಪತ್ರಿಕೆಯನ್ನು ಹಾಜರ್ಮಾಡುವಂತೆಯೂ ಕೇಳಲ್ಪಡಬಹುದು. ಅದನ್ನ ಅವರು ಹಾಜರ್ಮಾಡದೆ ಹೋದಲ್ಲಿ ಅವರ ಸವಾಲ್‌ಗಳು ತಿರಸ್ಕರಿಸಲ್ಪಡಬಹುದು.

6. ಹರಾಜಿನಲ್ಲಿ ಸ್ವತ್ತು ಯಾರ ಹೆಸರಿಗಾದರೂ ನಿಲ್ಲಿಸಲ್ಪಡುವದಕ್ಕೆ ಮುಂಚಿತವಾಗಿ, ಬಾಕಿದಾರನಾಗಲಿ ಆತನ ತರಫಿನವನಾಗಿ ಪ್ರವರ್ತಿಸುವ ಯಾ ಸದರೀ ಸ್ವತ್ತಿನಲ್ಲಿ ಬಾಧ್ಯತೆ ಇರುತ್ತೆಂದು ಹೇಳುವ ಯಾವ ಇತರ ಮನುಷ್ಯನೇ ಆಗಲಿ ಬಾಕಿಯಲ್ಲಿ ಬಂದಿರುವ ಪೂರಾ ಕಂದಾಯದ ಹಣವನ್ನೂ ಬಡ್ಡಿ ಮತ್ತು ಇತರ ಖರ್ಚುಗಳ ಸಮೇತ ಹಾಜರ್ಮಾಡುವ ಪಕ್ಷಕ್ಕೆ ಹರಾಜು ನಿಲ್ಲಿಸಲ್ಪಡುತ್ತೆ.

7. ಹರಾಜು ಡೆಪ್ಯುಟಿ ಕಮ್ಮಿಷನರವರಿಂದ ಮಂಜೂರ್ಮಾಡಲ್ಪಡುವ ತನಕ ಸ್ವತ್ತಿನ ಹರಾಜು ಪೂರ್ತಿಯಾಗುವದಿಲ್ಲ.

8. ಹರಾಜಿನಲ್ಲಿ ತೆಗದುಕೊಂಡವರು ಹರಾಜು ಮೊಬಲಗನ್ನ ಪೂರ್ತಿಯಾಗಿ ಪಾವತಿಮಾಡಿದ ಮೇಲೆ ಡೆಪ್ಯುಟಿ ಕಮ್ಮಿಷನರವರಿಂದ ಹರಾಜು ಮಂಜೂರ್ಮಾಡಲ್ಪಟ್ಟ ಕೂಡ್ಲೆ, ಹರಾಜುದಾರು ಸದರೀ ಸ್ವತ್ತಿನ ಸ್ವಾಧೀನವನ್ನ ಹೊಂದುವರು ಮತ್ತು ಸದರೀ ಸ್ವತ್ತು ಹರಾಜುದಾರನ ಹೆಸರಿನಲ್ಲಿ ರಿಜಿಸ್ಟರ್ ಮಾಡಲ್ಪಟ್ಟು ಡೆಪ್ಯುಟಿ ಕಮ್ಮಿಷನರವರಿಂದ ಸೇಲ್ ಪೊಹರ್ ಮಾಡಲ್ಪಟ್ಟ ಮೇಲೆ ಹರಾಜ್ ಸರಟಿಫಿಕೇಟ್ ಆತನಿಗೆ ಕೊಡಲ್ಪಡುವದು. ಸ್ವತ್ತಿನ ವಿವರಣೆಯಲ್ಲಿಯಾಗಲಿ ಯಾ ವಿಸ್ತೀರ್ಣದಲ್ಲಿಯೂ ಇರುವ ಸ್ಕಾ[illegible] ಗವರ್ಮೆಂಟಿನವರು ಜವಾಬ್ದಾರ್ರಲ್ಲವೆಂಬ ಅಂಶವನ್ನ ಸ್ಪಷ್ಟವಾಗಿ ತಿಳಿದಿರತಕ್ಕದ್ದು.

9. ಹರಾಜಿನಿಂದ ತಮಗೆ ನಷ್ಟ ಉಂಟಾಯಿತೆಂದು ಎಣಿಸುವ ಜನಗಳು ಹರಾಜ್ ತಾರೀಖು ಲಾಗಾಯತು [illegible]0 ದಿವಸಗಳಲ್ಲಿ ಡೆಪ್ಯುಟಿ ಕಮ್ಮಿಷನರವರಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಮತ್ತು ಅವರ ಹುಕುಮಿನ ಮೇಲೆ ಕಾನೂನಿ[illegible]ಲ್ಪಟ್ಟ ವಾಯಿದೆಯಲ್ಲಿ ಗವರ್ಮೆಂಟಿನವರಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಸ್ವತಂತ್ರರಾಗಿರುತ್ತಾರೆ. ಸ್ವತ್ತಿನ ವಿಕ್ರಯ[illegible] ಅಪ್ಪೀಲಿನಲ್ಲಿ ಆಗುವ ಫೈಸಲ್ ಹುಕುಮಿಗೆ ಬದ್ಧವಾಗಿರತಕ್ಕದ್ದು.